<u>ಅಸಲು ದಾವಾ **157/2025**</u> ಪಿ.ಡಬ್ಲ್ಯೂ:- **1**

ದಿನಾಂಕಃ **14-11-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ:- ವಾದಿಯ ಪರ ವಕೀಲರಿಂದ:-</u>

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ಸಾಲದ ಕರಾರು ಒಪ್ಪಂದ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-1 ಎಂದು, ಅಡಮಾನ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ಸಾಲದ ಪುನರುಜ್ಜೀವನ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-3 ಎಂದು, ವಕೀಲರ ಮೂಲಕ ಪ್ರತಿವಾದಿಗಳಿಗೆ ನೀಡಿದ ನೋಟೀಸನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-4 ಎಂದು, ಪ್ರತ್ಯುತ್ತರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-5 ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-6 ಎಂದು, ಬ್ಯಾಂಕ್ ಸ್ಟೇಟ್ಮೆಂಟನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಪ್ರತಿವಾದಿಯ ಪರ ವಕೀಲರು ಹಾಜರಿದ್ದು ಮತ್ತು ಪ್ರತಿವಾದ ಪತ್ರವನ್ನು ಸಲ್ಲಿಸಿರುವುದಿಲ್ಲ ಆದರೆ ನ್ಯಾಯುತ ದೃಷ್ಟಿಯಿಂದ ಪಾಟೀ ಸವಾಲಿಗೆ ಕಾಲಾವಕಾಶ ನೀಡಿ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.